# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಬುಧವಾರ, ೦೩, ಸೆಪ್ಟೆಂಬರ್, ೨೦೨೫ (ಭಾದ್ರಪದ ,೧೨, ಶಕವರ್ಷ, ೧೯೪೭)<br>BENGALURU, WEDNESDAY, 03, SEPTEMBER, 2025 (BHADRAPADA ,12, SHAKAVARSHA, 1947) | ನಂ. ೫೩೦<br>No. 530 |
|---|---|---|

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೂತನ '**ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ**'ಯನ್ನು (THE KARNATAKA AROGYA SANJEEVINI SCHEME –KASS) ಅನುಷ್ಠಾನಗೊಳಿಸಲು ರಚಿಸಲಾದ **KASS ಉನ್ನತ ಮಟ್ಟದ ಕಾರ್ಯನೀತಿ ಸಮಿತಿ** (KASS HIGH LEVEL POLICY COMMITTEE)ಯ ಸಂಯೋಜನೆಯನ್ನು ಮಾರ್ಪಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್ಎಂಆರ್ 2020, ದಿನಾಂಕ: 27.09.2024
2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಡತ ಸಂಖ್ಯೆ : HFW/321/FPR/2024.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ: 27.09.2024 ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯ ಒದಗಿಸಲು ರೂಪಿಸಿರುವ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ-(KASS)'ಯನ್ನು ಪರಿಣಾಮಕಾರಿ ಹಾಗೂ ಸುವ್ಯವಸ್ಥಿತವಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಸರ್ಕಾರವು ನಾಲ್ಕು ವಿವಿಧ ಸಮಿತಿಗಳನ್ನು ರಚಿಸಿ ಆದೇಶಿಸಲಾಗಿದೆ. ಈ ಪೈಕಿ, ಈ ಕೆಳಕಂಡ ಸದಸ್ಯರನ್ನು ಒಳಗೊಂಡ KASS ಉನ್ನತ ಮಟ್ಟದ ಕಾರ್ಯನೀತಿ ಸಮಿತಿಯನ್ನು (KASS HIGH LEVEL POLICY COMMITTEE) ರಚಿಸಲಾಗಿದೆ.

## (KASS HIGH LEVEL POLICY COMMITTEE)

### ಸಮಿತಿ ಸಂಯೋಜನೆ:

| ಕ್ರ. ಸಂ | ಪದನಾಮ | |
|---|---|---|
| 1. | ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು | ಅಧ್ಯಕ್ಷರು |
| 2 | ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು | ಸದಸ್ಯರು |
| 3 | ಆಯುಕ್ತರು, ಆಯುಷ್ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |
| 4 | ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು | ಸದಸ್ಯರು |
| 5 | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಸೇವೆಗಳು, ಬೆಂಗಳೂರು. | ಸದಸ್ಯರು |
| 6 | ಜಂಟಿ ನಿರ್ದೇಶಕರು (ವೈದ್ಯಕೀಯ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು. | ಸದಸ್ಯರು |
| 7 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು. | ಸದಸ್ಯರು |
| 8 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು | ಸದಸ್ಯರು |
| 9 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಕಾಸಸೌಧ, ಬೆಂಗಳೂರು. | ಸದಸ್ಯರು |
| 10 | ನಿರ್ದೇಶಕರು (ವೈದ್ಯಕೀಯ ನಿರ್ವಹಣೆ), ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು. | ಸದಸ್ಯರು |
| 11 | ಜಂಟಿ ನಿರ್ದೇಶಕರು, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS CELL), ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು. | ಸದಸ್ಯ ಕಾರ್ಯದರ್ಶಿ |

ಸಮಿತಿಯು ಅಗತ್ಯ ಸಂದರ್ಭಗಳಲ್ಲಿ-ಸರ್ಕಾರದ ಕಾರ್ಯದರ್ಶಿ, ಸಿಆಸುಇ (ಇ-ಆಡಳಿತ) ಇವರು ನಿಯೋಜಿಸುವ ಉನ್ನತ ಮಟ್ಟದ ತಾಂತ್ರಿಕ ಅಧಿಕಾರಿ, HRMS ಅಧಿಕಾರಿ, ಅಧ್ಯಕ್ಷರು, PHANA, ಅಧ್ಯಕ್ಷರು, IMA ಅಥವಾ ಬೇರೆ ಯಾವುದೇ ತಜ್ಞತೆ ಹೊಂದಿದ ಅಧಿಕಾರಿ/ ವ್ಯಕ್ತಿಗಳನ್ನು ಆಹ್ವಾನಿತ ಸದಸ್ಯರಾಗಿ ಸಭೆಯಲ್ಲಿ ಪಾಲ್ಗೊಳ್ಳಲು ಆಹ್ವಾನಿಸಬಹುದು.

ಮೇಲೆ ಓದಲಾದ (2)ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಸ್ತಾವನೆಯಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು - ಸದರಿ ಸಮಿತಿಗೆ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಬದಲಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು

ಕುಟುಂಬ ಕಲ್ಯಾಣ ಇಲಾಖೆ ಇವರನ್ನು ಅಧ್ಯಕ್ಷರನ್ನಾಗಿ ಮಾಡಿ ಮಾರ್ಪಡಿತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತುತ ದಿನಾಂಕ:27.09.2024ರ ಆದೇಶದಂತೆ ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದ ಮಹತ್ವದ ಕಾರ್ಯನೀತಿಯನ್ನು ಒಳಗೊಂಡ ವಿಷಯಗಳ ಬಗ್ಗೆ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಅಧ್ಯಕ್ಷತೆಯಲ್ಲಿನ KASS ಉನ್ನತ ಮಟ್ಟದ ಕಾರ್ಯನೀತಿ ಸಮಿತಿ (KASS HIGH LEVEL POLICY COMMITTEE)ಯಲ್ಲಿ ವಿವರವಾಗಿ ಪರಿಶೀಲಿಸಿ, ತೀರ್ಮಾನಗಳನ್ನು ಕೈಗೊಂಡು ಮಹತ್ವದ ಪ್ರಸ್ತಾವನೆಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸಲ್ಲಿಸಲಾಗುತ್ತದೆ. ಆದರೆ ಸದರಿ ಸಮಿತಿಯಲ್ಲಿ ಕ್ರಮ ಸಂಖ್ಯೆ:9 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ ಮೇಲ್ಪಟ್ಟ ಒಬ್ಬ ಅಧಿಕಾರಿಯನ್ನು ಮಾತ್ರ ಸಮಿತಿಯ ಸದಸ್ಯರನ್ನಾಗಿ ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರಸ್ತಾಪಿಸಿರುವಂತೆ ಸದರಿ ಸಮಿತಿಗೆ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಬದಲಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ಮಾಡುವುದು ಸೂಕ್ತವೆಂದು ನಿರ್ಧರಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್ಎಂಆರ್ 2020 (ಭಾ-18)**
**ದಿನಾಂಕ: 01.09.2025**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್ ಎಂಆರ್ 2020 (ಭಾ-18), ದಿನಾಂಕ:27.09.2024 ರನ್ವಯ ರಚಿಸಲಾಗಿರುವ **KASS ಉನ್ನತ ಮಟ್ಟದ ಕಾರ್ಯನೀತಿ ಸಮಿತಿ** (KASS HIGH LEVEL POLICY COMMITTEE)ಗೆ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಬದಲಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರನ್ನು ಸಮಿತಿಯ ಸದಸ್ಯರನ್ನಾಗಿ ನೇಮಿಸಿ ಸರ್ಕಾರವು ಆದೇಶಿಸಿದೆ.

ಈ ಹಿನ್ನಲೆಯಲ್ಲಿ ಕೆಳಕಂಡ ಸದಸ್ಯರನ್ನು ಒಳಗೊಂಡ KASS ಉನ್ನತ ಮಟ್ಟದ ಕಾರ್ಯನೀತಿ ಸಮಿತಿಯನ್ನು (KASS HIGH LEVEL POLICY COMMITTEE) ಪುನರ್ ರಚಿಸಲಾಗಿದೆ:

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**(KASS HIGH LEVEL POLICY COMMITTEE)**

**ಸಮಿತಿ ಸಂಯೋಜನೆ:**

| **ಕ್ರ. ಸಂ** | **ಪದನಾಮ** | |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2 | ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು | ಸದಸ್ಯರು |
| 3 | ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು | ಸದಸ್ಯರು |
| 4 | ಆಯುಕ್ತರು, ಆಯುಷ್ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |
| 5 | ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು | ಸದಸ್ಯರು |
| 6 | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಸೇವೆಗಳು, ಬೆಂಗಳೂರು. | ಸದಸ್ಯರು |
| 7 | ಜಂಟಿ ನಿರ್ದೇಶಕರು (ವೈದ್ಯಕೀಯ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು. | ಸದಸ್ಯರು |
| 8 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು. | ಸದಸ್ಯರು |
| 9 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು | ಸದಸ್ಯರು |
| 10 | ಸರ್ಕಾರದ ಉಪ ಕಾರ್ಯದರ್ಶಿ ಅಥವಾ ಮೇಲ್ಪಟ್ಟ ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಕಾಸಸೌಧ, ಬೆಂಗಳೂರು. | ಸದಸ್ಯರು |
| 11 | ನಿರ್ದೇಶಕರು (ವೈದ್ಯಕೀಯ ನಿರ್ವಹಣೆ), ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು. | ಸದಸ್ಯರು |
| 12 | ಜಂಟಿ ನಿರ್ದೇಶಕರು, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS CELL), ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬೆಂಗಳೂರು. | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.
(**ಪ್ರತಿಭಾ ಕೆ**.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾನಿಯಮಗಳು-3).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH